ಪೊಲೀಸ್ ಆಯುಕ್ತರ ಕಛೇರಿ, ಮಂಗಳೂರು ನಗರ.
ಎ.ಬಿ ಶೆಟ್ಟಿ ವೃತ್ತದ ಬಳಿ, ಮಂಗಳೂರು -575001 ದೂ. ಸಂ: 0824-2220800, 2220803
ಈ-ಮೇಲ್ : magmgc@ksp.gov.in.

****

ಪೊಲೀಸ್ ಆಯುಕ್ತರು ಮತ್ತು ಹೆಚ್ಚುವರಿ ಜಿಲ್ಲಾ ದಂಡಾಧಿಕಾರಿ, ಮಂಗಳೂರು ನಗರ,
ಮಂಗಳೂರು ರವರ ನಡವಳಿಗಳು

ವಿಷಯ: ಮಂಗಳೂರು ನಗರ ಪೊಲೀಸ್ ಕಮಿಷನರೇಟ್ ವ್ಯಾಪ್ತಿಯಲ್ಲಿ ರಾತ್ರಿಯ ವೇಳೆಯಲ್ಲಿ ವ್ಯಾಪಾರ-ವಹಿವಾಟಿನ ನಿರ್ಬಂಧದ ಸಮಯವನ್ನು ನಿಗಧಿಪಡಿಸಿರುವ ಬಗ್ಗೆ.

ಉಲ್ಲೇಖ: ಈ ಕಛೇರಿ ಅಪರಾಧ ವಿಮರ್ಶನಾ ಸಭೆಯ ನಡವಳಿ ಆದೇಶ ಸಂಖ್ಯೆ:ಡಿಸಿಪಿ(ಅ&ಸಂ) ಸಿ.ಎಮ್,ಟಿ18/ಮಂನ/2026 ದಿನಾಂಕ: 23-11-2026.

*****

ಪ್ರಸ್ತಾವನೆ :

ಮಂಗಳೂರು ನಗರವು ಕರಾವಳಿ ಕರ್ನಾಟಕದ ಪ್ರಮುಖ ವಾಣಿಜ್ಯ, ಶೈಕ್ಷಣಿಕ ಹಾಗೂ ಬಂದರು ನಗರವಾಗಿದ್ದು, ವಿವಿಧ ಧರ್ಮ, ಜಾತಿ ಮತ್ತು ಸಮುದಾಯಗಳ ಜನರು ಸಹಬಾಳ್ವೆಯಿಂದ ಜೀವನ ನಡೆಸುತ್ತಿರುವ ಕೋಮು ಸೂಕ್ಷ್ಮ ಪ್ರದೇಶವಾಗಿದೆ. ಮಂಗಳೂರು ನಗರ ಪೊಲೀಸ್ ಕಮಿಷನರೇಟ್ ವ್ಯಾಪ್ತಿಯ ಹಲವಾರು ಪ್ರದೇಶಗಳಲ್ಲಿ ರಾತ್ರಿ ತಡರಾತ್ರಿಯವರೆಗೂ ಹಾಗೂ ಕೆಲವೊಂದು ಕಡೆಗಳಲ್ಲಿ ಬೆಳಗಿನ ಜಾವದವರೆಗೂ ವ್ಯಾಪಾರ ವಹಿವಾಟು, ಹೋಟೆಲ್, ರೆಸ್ಟೋರೆಂಟ್, ಟೀ ಸ್ಟಾಲ್, ಪಾನ್ ಅಂಗಡಿ ಹಾಗೂ ಇತರೆ ವಾಣಿಜ್ಯ ಚಟುವಟಿಕೆಗಳು ನಡೆಯುತ್ತಿರುವುದಾಗಿದೆ.

ಪ್ರಸ್ತಾವನೆಗೆ ಕಾರಣಗಳು :

1. **ಕಾನೂನು ಮತ್ತು ಸುವ್ಯವಸ್ಥೆ ಕಾಪಾಡುವ ಅಗತ್ಯತೆ**

ಮಂಗಳೂರು ನಗರವು ಕೋಮು ಸೂಕ್ಷ್ಮ ಪ್ರದೇಶವಾಗಿದ್ದು, ರಾತ್ರಿ ವೇಳೆಯಲ್ಲಿ ಜನರ ಅನಗತ್ಯ ಗುಂಪುಗೂಡುವಿಕೆ, ಅನಗತ್ಯ ಓಡಾಟ ಹಾಗೂ ಸಾಮಾಜಿಕ ಜಾಲತಾಣಗಳ ಮೂಲಕ ಹರಡುವ ವದಂತಿಗಳ ಪರಿಣಾಮವಾಗಿ ಕಾನೂನು ಮತ್ತು ಸುವ್ಯವಸ್ಥೆಗೆ ಧಕ್ಕೆಯಾಗುವ ಸಾಧ್ಯತೆಗಳಿರುತ್ತವೆ. ವ್ಯಾಪಾರ ವಹಿವಾಟುಗಳು ರಾತ್ರಿ ಪೂರ್ತಿ ನಡೆಯುವುದರಿಂದ ಜನಸಂದಣಿ ಹೆಚ್ಚಾಗಿ, ಅಹಿತಕರ ಘಟನೆಗಳು ಸಂಭವಿಸುವ ಸಾಧ್ಯತೆ ಇರುತ್ತದೆ.

2. **ಮಾದಕ ವ್ಯಸನ ಹಾಗೂ ಅಪರಾಧ ಚಟುವಟಿಕೆಗಳ ನಿಯಂತ್ರಣ**

ರಾತ್ರಿ ವೇಳೆ ತೆರೆದಿರುವ ಅಂಗಡಿ, ಹೋಟೆಲ್ ಮತ್ತು ಇತರೆ ವ್ಯಾಪಾರ ಕೇಂದ್ರಗಳ ಸುತ್ತಮುತ್ತ ಮಾದಕ ವ್ಯಸನಿಗಳು, ಸಮಾಜಘಾತಕ ವ್ಯಕ್ತಿಗಳು ಹಾಗೂ ಅನುಮಾನಾಸ್ಪದ ವ್ಯಕ್ತಿಗಳು ಅನಗತ್ಯವಾಗಿ ಓಡಾಡುತ್ತಾ ಕಾಲಕರಣ ಮಾಡುವುದು ಕಂಡುಬರುತ್ತಿದೆ. ಇದರಿಂದ ಅಪರಾಧ ಚಟುವಟಿಕೆಗಳಿಗೆ ಅವಕಾಶ ದೊರೆಯುತ್ತದೆ.

3. **ಸಾರ್ವಜನಿಕರಿಗೆ ಉಂಟಾಗುವ ತೊಂದರೆ (Public Nuisance)**

ರಾತ್ರಿ ವೇಳೆಯಲ್ಲಿ ವ್ಯಾಪಾರ ಕೇಂದ್ರಗಳ ಬಳಿ ವಾಹನಗಳ ನಿಲುಗಡೆ, ಜೋರಾದ ಶಬ್ದ, ಗದ್ದಲ, ರಸ್ತೆಗಳಲ್ಲಿ ಅನಗತ್ಯ ಜನರ ಗುಂಪುಗೂಡುವಿಕೆ ಮುಂತಾದವುಗಳಿಂದ ಸಾರ್ವಜನಿಕರಿಗೆ ತೊಂದರೆ ಉಂಟಾಗುತ್ತದೆ. ವಿಶೇಷವಾಗಿ ಆಸ್ಪತ್ರೆ ರೋಗಿಗಳಿಗೆ, ವಸತಿ ಪ್ರದೇಶಗಳಲ್ಲಿರುವ ಸಾರ್ವಜನಿಕರ ನೆಮ್ಮದಿ ಮತ್ತು ಶಾಂತಿಗೆ ಭಂಗ ಉಂಟಾಗುತ್ತದೆ.

ಈ ಹಿನ್ನೆಲೆಯಲ್ಲಿ ಸಾರ್ವಜನಿಕ ಶಾಂತಿ, ಕಾನೂನು ಮತ್ತು ಸುವ್ಯವಸ್ಥೆ ಕಾಪಾಡುವ ದೃಷ್ಟಿಯಿಂದ ಹಾಗೂ ಅಪರಾಧ ಚಟುವಟಿಕೆಗಳನ್ನು ನಿಯಂತ್ರಿಸುವ ಉದ್ದೇಶದಿಂದ ವ್ಯಾಪಾರ ವಹಿವಾಟಿನ ಮೇಲಿನ ನಿರ್ಬಂಧವನ್ನು ರಾತ್ರಿ 11-45 ಗಂಟೆಯಿಂದ ಮಾರನೇ ದಿನ ಬೆಳಿಗ್ಗೆ 05-30 ಗಂಟೆಯವರೆಗೆ ಸಮಯವನ್ನು ನಿಗದಿಪಡಿಸುವುದು ಅವಶ್ಯವೆಂದು ಮನಗಂಡಿರುತ್ತೇನೆ.

ಮೇಲ್ಕಂಡ ಅಂಶಗಳನ್ನು ಹಾಗೂ ಮಂಗಳೂರು ನಗರ ಪೊಲೀಸ್ ಕಮಿಷನರೇಟ್ ವ್ಯಾಪ್ತಿಯಲ್ಲಿನ ಕಾನೂನು ಮತ್ತು ಸುವ್ಯವಸ್ಥೆಯ ಪರಿಸ್ಥಿತಿ, ಸಾರ್ವಜನಿಕ ಶಾಂತಿ, ಅಪರಾಧ ನಿಯಂತ್ರಣ, ಸಾರ್ವಜನಿಕ ಸುರಕ್ಷತೆ, ದಂಡನೀಯ ಉಪದ್ರವಗಳ ನಿಯಂತ್ರಣಕ್ಕಾಗಿ (Annoyance & Public Nuisance control) ಹಾಗೂ ಸಾರ್ವಜನಿಕ ಹಿತಾಸಕ್ತಿಯನ್ನು ಪರಿಗಣಿಸಿ, ಸುಧೀರ್ ಕುಮಾರ್ ರೆಡ್ಡಿ, ಭಾ.ಪೊ.ಸೇ., ಪೊಲೀಸ್ ಆಯುಕ್ತರು, ಮತ್ತು ಹೆಚ್ಚುವರಿ ಜಿಲ್ಲಾ ದಂಡಾಧಿಕಾರಿ, ಮಂಗಳೂರು ನಗರ ಆದ ನಾನು ಭಾರತೀಯ ನಾಗರಿಕ ಸುರಕ್ಷಾ ಸಂಹಿತೆ 2023 ರ ಕಲಂ 163 ಹಾಗೂ ಕರ್ನಾಟಕ ಪೊಲೀಸ್ ಕಾಯ್ದೆ, 1963ರ ಕಲಂ 31(W) ರಲ್ಲಿ ಪ್ರದತ್ತವಾಗಿರುವ ಅಧಿಕಾರವನ್ನು ಚಲಾಯಿಸಿ ಈ ಕೆಳಕಂಡಂತೆ ಆದೇಶ ಹೊರಡಿಸುತ್ತೇನೆ.

CamScanner

ಆದೇಶ ಸಂಖ್ಯೆ: ಎಂ.ಎ.ಜಿ -1/272/ಎಂ.ಜಿ.ಸಿ/2026, **ದಿನಾಂಕ : 23-11-2026**

ಮೇಲೆ ವಿವರಿಸಿದ ಅಂಶಗಳನ್ನು ಆಧರಿಸಿ ಮಂಗಳೂರು ನಗರ ಪೊಲೀಸ್ ಕಮಿಷನರೇಟ್ ವ್ಯಾಪ್ತಿಯಲ್ಲಿರುವ ಎಲ್ಲಾ ವ್ಯಾಪಾರಿಕ ಸಂಸ್ಥೆಗಳು, ಅಂಗಡಿಗಳು, ಹೋಟೆಲ್‌ಗಳು, ರೆಸ್ಟೋರೆಂಟ್‌ಗಳು, ಟೀ ಸ್ಟಾಲ್‌ಗಳು, ಪಾನ್ ಅಂಗಡಿಗಳು ಹಾಗೂ ಇತರೆ ವಾಣಿಜ್ಯ ಚಟುವಟಿಕೆಗಳನ್ನು ನಡೆಸುವ ಸಂಸ್ಥೆಗಳು **ಪ್ರತಿದಿನ ರಾತ್ರಿ 11-45 ಗಂಟೆಯಿಂದ ಮಾರನೇ ದಿನ ಬೆಳಿಗ್ಗೆ 05-30 ಗಂಟೆಯವರೆಗೆ ಮಾತ್ರ** ವ್ಯಾಪಾರ ವಹಿವಾಟು ನಿರ್ಭಂದಿಸಲಾಗಿದೆ. (ಸಿಎಲ್-4, ಸಿಎಲ್-6(a), ಸಿಎಲ್-7 ಲೈಸೆನ್ಸ್ ಹೊಂದಿದವರಿಗೆ ಅನ್ವಯಿಸುವುದಿಲ್ಲ ಅವರು ಲೈಸೆನ್ಸ್‌ನಲ್ಲಿ ನಿಗದಿಪಡಿಸಲಾದ ನಿಯಮದಂತೆ ಪಾಲಿಸುವುದು)

ಆಸ್ಪತ್ರೆಗಳು, ಔಷಧ ಅಂಗಡಿಗಳು, ತುರ್ತು ಸೇವೆಗಳು, ಅಗತ್ಯ ಸಾರ್ವಜನಿಕ ಉಪಯೋಗಿತಾ ಸೇವೆಗಳು ಹಾಗೂ ಸರ್ಕಾರ ಅಥವಾ ಸಂಬಂಧಪಟ್ಟ ಪ್ರಾಧಿಕಾರಗಳಿಂದ ವಿಶೇಷ ಅನುಮತಿ ಪಡೆದ ಸಂಸ್ಥೆಗಳಿಗೆ ಈ ಆದೇಶ ಅನ್ವಯಿಸುವುದಿಲ್ಲ.

ಈ ಆದೇಶವು ತಕ್ಷಣದಿಂದ ಜಾರಿಗೆ ಬಂದು ಮುಂದಿನ ಆದೇಶದವರೆಗೆ ಜಾರಿಯಲ್ಲಿರುತ್ತದೆ.

COMMISSIONER OF POLICE ★ MANGALORE CITY, MANGALORE ★

23/11/26

(ಸುಧೀರ್ ಕುಮಾರ್ ರೆಡ್ಡಿ, ಐ.ಪಿ.ಎಸ್.)
ಪೊಲೀಸ್ ಆಯುಕ್ತರು
ಮತ್ತು ಹೆಚ್ಚುವರಿ ಜಿಲ್ಲಾ ದಂಡಾಧಿಕಾರಿ
ಮಂಗಳೂರು ನಗರ, ಮಂಗಳೂರು

ಪೊಲೀಸ್ ಆಯುಕ್ತರು
ಮಂಗಳೂರು ನಗರ, ಮಂಗಳೂರು

ಪ್ರತಿ ಮಾಹಿತಿ ಮತ್ತು ಸೂಕ್ತ ಕ್ರಮಕ್ಕಾಗಿ:-

1 ಮಾನ್ಯ ಜಿಲ್ಲಾಧಿಕಾರಿಯವರು, ದಕ್ಷಿಣ ಕನ್ನಡ ಜಿಲ್ಲೆ, ಮಂಗಳೂರು ರವರಿಗೆ ಮಾಹಿತಿಗಾಗಿ.
2 ಉಪ ಪೊಲೀಸು ಆಯುಕ್ತರು, (ಅ&ಸಂ)& (ಕಾ&ಸು) ಮಂಗಳೂರು ನಗರ.
3 ಎಲ್ಲಾ ಸಹಾಯಕ ಪೊಲೀಸು ಆಯುಕ್ತರು, ಗಳಿಗೆ ಮಂಗಳೂರು ನಗರ
4 ಎಲ್ಲಾ ಪೊಲೀಸ್ ನಿರೀಕ್ಷಕರುಗಳಿಗೆ ಮಂಗಳೂರು ನಗರ.
5 ಹಿರಿಯ ಸಹಾಯಕ ನಿರ್ದೇಶಕರು, ವಾರ್ತಾ ಸಾರ್ವಜನಿಕ ಸಂಪರ್ಕ ಇಲಾಖೆ, ಮಂಗಳೂರು ಇವರಿಗೆ ಈ ಅಧಿಸೂಚನೆಯನ್ನು ವಾರ್ತಾ ಮಾಧ್ಯಮಗಳಲ್ಲಿ ವಾರ್ತಾ ರೂಪದಲ್ಲಿ ಉಚಿತವಾಗಿ ಪ್ರಚಾರ ಪಡಿಸಲು ಕೋರಿದೆ.
6 ತಹಶೀಲ್ದಾರರು,ಮಂಗಳೂರು ತಾಲೂಕು, ಉಳ್ಳಾಲ, ಸುರತ್ಕಲ್, ಮುಲ್ಕಿ, ಮೂಡಬಿದ್ರೆ
7 ಈ ಕಛೇರಿಯ ಗಣಕಯಂತ್ರ ಶಾಖೆಗೆ ಪೊಲೀಸ್ ವೆಬ್‌ಸೈಟ್‌ನಲ್ಲಿ ಅಳವಡಿಸಲು.
8 ಈ ಕಛೇರಿಯ ಸಿ.ಬಿ ಶಾಖೆ ಮತ್ತು ಸಿ.ಎಸ್.ಬಿ ವಿಭಾಗಕ್ಕೆ ಮಾಹಿತಿ ಮತ್ತು ಸೂಕ್ತ ಕ್ರಮಕ್ಕಾಗಿ.
9 ಪೊಲೀಸ್ ನಿರೀಕ್ಷಕರು, ನಗರ ನಿಯಂತ್ರಣ ಕೊಠಡಿ ರವರಿಗೆ ಸೂಕ್ತ ಕ್ರಮಕ್ಕಾಗಿ.

CamScanner